# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 633
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನಸಭಾ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 09-03-2026
ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

****

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು. ಉಜರೆ ಗ್ರಾಮದಲ್ಲಿ 30 ಕೆ.ವಿ ವಿದ್ಯುತ್ ಘಟಕ ಪ್ರಾರಂಭ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ: | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು. ಉಜಿರೆ ಗ್ರಾಮದಲ್ಲಿ 33ಕೆವಿ ವಿದ್ಯುತ್ ಉಪಕೇಂದ್ರ ಸ್ಥಾಪಿಸಲು ದಿನಾಂಕ:17.03.2025 ರಂದು ಗುತ್ತಿಗೆ ಆದೇಶ ನೀಡಲಾಗಿರುತ್ತದೆ.<br>ಉಪಕೇಂದ್ರದ ಸ್ಥಾಪನೆಗೆ ಮಂಜೂರಾಗಿರುವ ಸರ್ಕಾರಿ ಜಮೀನಿನಲ್ಲಿರುವ ಕೆಲವೊಂದು ಮರು-ಗಿಡಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆಯಿಂದ ಆಕ್ಷೇಪಣೆ ಇರುವುದರಿಂದ, ಅರಣ್ಯ ಇಲಾಖೆಯ ಮಂಜೂರಾತಿಗಾಗಿ ದಿನಾಂಕ:21.11.2025 ರಂದು ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಅರಣ್ಯ ಇಲಾಖೆಯ ಮಂಜೂರಾತಿ ದೊರೆತ ನಂತರ ಉಪಕೇಂದ್ರದ ಕಾಮಗಾರಿ ಪ್ರಾರಂಭಿಸಬೇಕಾಗಿರುತ್ತದೆ.<br>33 ಕೆವಿ ಉಪಕೇಂದ್ರಕ್ಕೆ ಅಗತ್ಯವಿರುವ ವಿದ್ಯುತ್ ಮಾರ್ಗ:- 231 ಸಂಖ್ಯೆಯ ಸ್ಪನ್ ಪೋಲ್ ಮತ್ತು 211 ಸಂಖ್ಯೆಯ ಟವರ್ ಗಳನ್ನು ಒಳಗೊಂಡಂತೆ, ಒಟ್ಟು 21.433 ಕಿ.ಮೀ, ಉದ್ದದ 33ಕೆವಿ ಜೋಡಿ ವಿದ್ಯುತ್ ಮಾರ್ಗವನ್ನು ನಿರ್ಮಿಸಬೇಕಾಗಿದ್ದು, ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದ್ದು, 136 ಸಂಖ್ಯೆಯ 11 ಮೀಟರ್ ಸ್ಪನ್ ಪೋಲ್‌ಗಳು ಹಾಗೂ 91 ಸಂಖ್ಯೆಯ ಟವರ್‌ಗಳ ಅಳವಡಿಕೆ ಕಾಮಗಾರಿ ಪೂರ್ಣಗೊಂಡಿರುತ್ತದೆ. |
| ಆ) | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆಯೇ: | ಸದರಿ ಕಾಮಗಾರಿಗೆ ಬೆಳ್ತಂಗಡಿ ತಾಲೂಕು, ಉಜಿರೆ ಗ್ರಾಮದ ಸರ್ವೆನಂ:393/3ರಲ್ಲಿ 0.96 ಎಕರೆ ಸರ್ಕಾರಿ ಜಮೀನು ಮಂಜೂರಾಗಿರುತ್ತದೆ. ಜಿಲ್ಲಾಧಿಕಾರಿಯವರ ಆದೇಶದಂತೆ ಸಂಬಂಧಪಟ್ಟ ಮೊತ್ತಗಳನ್ನು ಪಾವತಿಸಿ, ಮೆಸ್ಕಾಂ ಹೆಸರಿಗೆ RTC ವರ್ಗಾವಣೆಗೊಂಡಿರುತ್ತದೆ. ಸದರಿ ಜಾಗದಲ್ಲಿ ಉಪಕೇಂದ್ರ ನಿರ್ಮಿಸಲು ದಿನಾಂಕ 05.02.2025ರಂದು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ, ದಿನಾಂಕ:17.03.2025 ರಂದು ಆದೇಶ ನೀಡಲಾಗಿದೆ. |
| ಇ) | ಸದರಿ ಕಾಮಗಾರಿಗೆ ಮಂಜೂರಾಗಿರುವ, ಬಿಡುಗಡೆಯಾಗಿರುವ ಹಾಗೂ ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು: | ಮೆಸ್ಕಾಂನ ಬಂಡವಾಳ ಕಾಮಗಾರಿ ಯೋಜನೆಯಡಿ ಸದರಿ ಕಾಮಗಾರಿಗೆ ಪರಿಷ್ಕೃತ ಅಂದಾಜು ವೆಚ್ಚದಂತೆ ರೂ.2636.32 ಲಕ್ಷ ನಿಗದಿಪಡಿಸಲಾಗಿದ್ದು, ಜನವರಿ-2026 ರ ಅಂತ್ಯಕ್ಕೆ, ರೂ. 489.13 ಲಕ್ಷ ವಿನಿಯೋಗಿಸಲಾಗಿದೆ. |
| ಈ) | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಮಾಡಿ. ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಸಹ ಪೂರ್ಣಗೊಳಿಸಲಾಗಿದ್ದಲ್ಲಿ.<br>ಕಾಮಗಾರಿಯ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ: | ಸದರಿ ಕಾಮಗಾರಿಯಲ್ಲಿ ಉಪಕೇಂದ್ರ ಸ್ಥಾಪನೆಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಪಡಿಸಿ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದ್ದು, ಪ್ರಸ್ತುತ ಸದರಿ ಜಾಗದಲ್ಲಿನ ಮರಗಳನ್ನು ತೆರವುಗೊಳಿಸುವಲ್ಲಿ ಅರಣ್ಯ ಇಲಾಖೆ ಆಕ್ಷೇಪಣೆ ಇರುವುದರಿಂದ, ಉಪಕೇಂದ್ರ ನಿರ್ಮಾಣ ಕಾಮಗಾರಿ ಆರಂಭವಾಗಿರುವುದಿಲ್ಲ.<br>ಉಪಕೇಂದ್ರಕ್ಕೆ ಸಂಬಂಧಿಸಿದಂತೆ, ಒಟ್ಟು 21.433 ಕಿ.ಮೀ, ಉದ್ದದ 33 ಕೆವಿ ಜೋಡಿ ವಿದ್ಯುತ್ ಮಾರ್ಗ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು ವಿವರಗಳು ಈ ಕೆಳಗಿನಂತಿವೆ:<br>1. ಒಟ್ಟು ಅನುಮೋದಿತ 231 ಸಂಖ್ಯೆಯ ಸ್ಪನ್ ಪೋಲ್‌ಗಳ ಪೈಕಿ, 136 ಸಂಖ್ಯೆಯ 11 ಮೀಟರ್ ಸ್ಪನ್ ಪೋಲ್‌ಗಳ ಅಳವಡಿಕೆ ಪೂರ್ಣಗೊಂಡಿದೆ. ಉಳಿದ 95 ಸಂಖ್ಯೆಯ ಸ್ಪನ್ ಪೋಲ್ ಅಳವಡಿಕೆ ಕಾಮಗಾರಿ ಪ್ರಗತಿಯಲ್ಲಿರುತ್ತದೆ. |

| | | |
|---|---|---|
| | | 2. ಒಟ್ಟು ಅನುಮೋದಿತ 211 ಸಂಖ್ಯೆಯ ಟವರ್‌ಗಳ ಪೈಕಿ, 91 ಸಂಖ್ಯೆಯ ಟವರ್‌ಗಳ ಕಾಮಗಾರಿ ಪೂರ್ಣಗೊಂಡಿದೆ. ಉಳಿದ 120 ಸಂಖ್ಯೆಯ ಟವರ್ ಕಾಮಗಾರಿ ಪ್ರಗತಿಯಲ್ಲಿರುತ್ತದೆ. |
| ಉ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ಉಜಿರೆ ಗ್ರಾಮದಲ್ಲಿನ 30 ಕೆ.ವಿ. ವಿದ್ಯುತ್ ಘಟಕವನ್ನು ಯಾವ ಕಾಲಮಿತಿಯೊಳಗೆ ಲೋಕಾರ್ಪಣೆಗೊಳಿಸಲಾಗುವುದು? | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲೂಕು, ಉಜಿರೆ ಗ್ರಾಮದ ಸರ್ವೆನಂ:393/3 ರಲ್ಲಿ 0.96 ಎಕರೆ ಜಾಗದಲ್ಲಿರುವ ಕೆಲವೊಂದು ಮರ-ಗಿಡಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆಯಿಂದ ಆಕ್ಷೇಪಣೆ ಇರುವುದರಿಂದ, ಅರಣ್ಯ ಇಲಾಖೆಯ ಮಂಜೂರಾತಿಗಾಗಿ ಇ-ಪರಿವೇಶ್ ಪೋರ್ಟಲ್ ನಲ್ಲಿ ದಿನಾಂಕ 21.11.2025 ರಂದು ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br>ದಿನಾಂಕ 17.03.2025ರ ಕಾರ್ಯಾದೇಶದಂತೆ ವಿದ್ಯುತ್ ಘಟಕವನ್ನು ದಿನಾಂಕ:16.03.2026 ರೊಳಗೆ ಲೋಕಾರ್ಪಣೆ ಮಾಡಬೇಕಾಗಿದ್ದು, ಅರಣ್ಯ ಇಲಾಖೆಯ ಅನುಮತಿ ದೊರೆಯದೆ ಇರುವುದರಿಂದ ಕಾಮಗಾರಿ ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ.<br>ಪ್ರಸ್ತುತ, 33 ಕೆವಿ ಲೈನ್ ಕಾಮಗಾರಿಯು ಪ್ರಗತಿಯಲ್ಲಿದ್ದು, ವಿದ್ಯುತ್ ಉಪಕೇಂದ್ರದ ಜಾಗದಲ್ಲಿರುವ ಮರ-ಗಿಡಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆಯಿಂದ ಮಂಜೂರಾತಿ ದೊರೆತ ನಂತರ ಕಾಮಗಾರಿಯನ್ನು ಮೆಸ್ಕಾಂ ವತಿಯಿಂದ ಪೂರ್ಣಗೊಳಿಸಲಾಗುವುದು. |

ಸಂಖ್ಯೆ: ಎನರ್ಜಿ 45 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು